# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 23-03-2021 ಪ್ರಶ್ನೆ ಸಂಖ್ಯೆ : 1650(1895)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 23-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಕುಂದಾಪುರ ಪುರಸಭೆಗೆ ಕೆ.ಎಸ್.ಡಬ್ಲ್ಯೂ.ಎಸ್.ನಲ್ಲಿ ಕುಡಿಯುವ ನೀರು ಪೂರೈಕೆ ಕುರಿತು

(ಅ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆ ಗೆ ಕೆ.ಎಸ್.ಡಬ್ಲ್ಯೂ.ಎಸ್. ನಲ್ಲಿ 24/7 ಕುಡಿಯುವ ನೀರು ಪೂರೈಸುವ ಯೋಜನೆಯ ಡಿಪಿಆರ್ ಮತ್ತು ನಕ್ಷೆಯನ್ನು ತಯಾರಿಸಲಾಗಿದೆಯೇ; (ಪ್ರತಿಯನ್ನು ಒದಗಿಸುವುದು ) ಈ ಯೋಜನೆಯ ಅಂದಾಜು ವೆಚ್ಚವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಈ ಕಾಮಗಾರಿಯ ಟೆಂಡರ್ ಅವಧಿ ಎಷ್ಟು; ಟೆಂಡರ್ ಪಡೆದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ಯಾವುದು; ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು;

(ಇ) ಈ ಕಾಮಗಾರಿಗಾಗಿ ಕಾಂಕ್ರೀಟ್ ರಸ್ತೆಗಳ ಮಧ್ಯಭಾಗವನ್ನು ಕತ್ತರಿಸಿ ಕಾಮಗಾರಿ ನಿರ್ವಹಿಸಿದ್ದು ನಂತರ ಅವುಗಳನ್ನು ಮರು ಕಾಂಕ್ರೀಟ್ ಮಾಡದಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾಧ್ಯಮದಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಮಗಾರಿಯನ್ನು ಶೀಘ್ರವಾಗಿ ಮುಕ್ತಾಯಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?